## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಿ.ಎಸ್.ರಾಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ, ಶಿವಪುರ, ಹೊಳಲ್ಕೆರೆ ತಾಲ್ಲೂಕು ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BD-7347/2014/DRE-5 ದಿನಾಂಕ. 05.05.2017.

2) ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BD-7347/2014/DRE-5 ದಿನಾಂಕ. 12.04.2017.

-----

### ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 05.05.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಜಿ.ಎಂ.ಲೋಕೇಶ್ ಬಿನ್ ಮಹದೇವಪ್ಪ, ಗಂಜಿಗಟ್ಟಿ, ಮುಟಗದೂರು ಅಂಚೆ, ಬಿ.ದುರ್ಗ ಹೋಬಳಿ, ಹೊಳಲ್ಕೆರೆ ತಾಲ್ಲೂಕು ಇವರು ಅಂದನೂರು ಗ್ರಾಮ ಪಂಚಾಯತಿಯಲ್ಲಿ 2009-10ನೇ ಸಾಲಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸರ್ಕಾರದಿಂದ ಮಂಜೂರಾದ ಕೂಲಿ ಹಣವನ್ನು ಈ ಕೆಳಕಂಡವರು ದುರುಪಯೋಗಪಡಿಸಿಕೊಂಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಶ್ರೀ ಜಿ.ಎಸ್.ರಾಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ. ಗ್ರಾಮ ಪಂಚಾಯತಿ, ಶಿವಪುರ, ಹೊಳಲ್ಕೆರೆ ತಾಲ್ಲೂಕು.
2. ಶ್ರೀ ನಟೇಶ್, ಹಿಂದಿನ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಳಲ್ಕೆರೆ.
3. ಶ್ರೀ ಎಸ್.ಟಿ.ಬಸವರಾಜಪ್ಪ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಳಲ್ಕೆರೆ.
4. ಶ್ರೀ ತಿಮ್ಮಪ್ಪ, ಹಿಂದಿನ ಅಧ್ಯಕ್ಷರು, ಅಂದನೂರು ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಗಳನ್ನು ಪಡೆದುಕೊಂಡಿದ್ದು, ಸದರಿ ಸಾಲಿನಲ್ಲಿ ಯಾವುದೇ ಕಾಮಗಾರಿಗಳು ನಡೆಯದೆ ಕೂಲಿಕಾರರಿಗೆ ಬಿಲ್ ಪಾವತಿಸಿರುವುದಿಲ್ಲವೆಂದು, ಎಂ.ಬಿ.ಪುಸ್ತಕದಲ್ಲಿ ಕಾಮಗಾರಿಯನ್ನು ನಮೂದಿಸಿ ಎಲ್ಲಾ ಕಾಮಗಾರಿಯನ್ನು ಗುಣಮಟ್ಟದಿಂದ ನಿರ್ವಹಿಸಲಾಗಿದ್ದು ಯಾವುದೇ ಕೂಲಿ ಹಣ ದುರುಪಯೋಗವಾಗಿಲ್ಲವೆಂದು ತಿಳಿಸಿ ದೂರನ್ನು ಕೈಬಿಡುವಂತೆ ಹೇಳಿಕೆ ಸಲ್ಲಿಸಿರುತ್ತಾರೆಂದು ತಿಳಿಸಿರುತ್ತಾರೆ.

ಲೋಕಾಯುಕ್ತ ಕಚೇರಿಯು ಆಪಾದಿತರ ಆಕ್ಷೇಪಣೆಯ ಬಗ್ಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿದ್ದು, ದೂರಿನ ಅಂಶಗಳನ್ನೇ ಪುನರುಚ್ಚರಿಸಿದ್ದಾರೆಂದು ತಿಳಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ ಎಂದು ತಿಳಿಸಿರುತ್ತಾರೆ:-

1. 2009-10ನೇ ಸಾಲಿನಲ್ಲಿ ನರೇಗ ಯೋಜನೆಯಲ್ಲಿ ಶ್ರೀ ರಾಜಪ್ಪ, ಅಂದಿನ ಕಾರ್ಯದರ್ಶಿ, ಅಂದನೂರು ಗ್ರಾಮ ಪಂಚಾಯತಿ ಇವರು ಗ್ರಾಮ ಪಂಚಾಯತಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಶ್ರೀ ಕೆ.ಎಂ.ಲಾಲ್ಯನಾಯಕ, ಶ್ರೀ ಎಂ.ಎಸ್.ನಂದೀಶಪ್ಪ ಮತ್ತು ಶ್ರೀ ಎ.ಎಸ್.ಮರಳುಸಿದ್ಧಪ್ಪ ಇವರುಗಳ ಹೆಸರಿನಲ್ಲಿ ಚೆಕ್ ಮೂಲಕ ಸರ್ಕಾರದ ಹಣವನ್ನು ಡ್ರಾ ಮಾಡಿರುವುದಾಗಿ ಒಪ್ಪಿಕೊಂಡಿರುತ್ತಾರೆ. ಈ ಅಂಶವು ದಾಖಲೆಗಳಿಂದಲೂ ದೃಢಪಟ್ಟಿದೆ.
2. ಗ್ಯಾರೇಹಳ್ಳಿಯ ರಿ.ಸ.ನಂ.36/3ಪಿ ಯಲ್ಲಿ ನೀರು ಸಂಗ್ರಹಣಾ ತೊಟ್ಟಿ ನಿರ್ಮಾಣವಾಗದೆ ಇದ್ದರೂ ಸಹ ಅಳತೆ ಪುಸ್ತಕದಲ್ಲಿ ವಿವರಗಳನ್ನು ನಮೂದಿಸಿ ರೂ. 2,76,543/- ಗಳ ಮೊತ್ತದ ಬಿಲ್ಲು ಪಾವತಿ ಮಾಡಿ ಆರ್ಥಿಕ ಅವ್ಯವಹಾರ ಮಾಡಿದ್ದಾರೆ.
3. ಕಾರ್ಯನಿರ್ವಾಹಕ ಅಧಿಕಾರಿಗಳು ಸ.ನಂ. 12/6ರಲ್ಲಿ 3.00 ಲಕ್ಷ ಮೊತ್ತದ ನೀರು ಸಂಗ್ರಹಣಾ ತೊಟ್ಟಿ ಕಾಮಗಾರಿಯನ್ನು ಕೈಗೊಳ್ಳಲು ಸೂಚ್ಚಿಸಿದ್ದರೂ ಸಹ, ಅವರ ಆದೇಶವನ್ನು ಪಾಲಿಸದೇ ಸ.ನಂ.12/9ಪಿ ಹತ್ತಿರ ನೀರು ಸಂಗ್ರಹಣಾ ತೊಟ್ಟಿ ನಿರ್ಮಿಸಿರುವುದಾಗಿ ಅಳತೆ ಪುಸ್ತಕದಲ್ಲಿ ವಿವರಣೆಗಳನ್ನು ದಾಖಲಿಸಿ ರೂ. 2,72,070/- ಗಳ ಮೊತ್ತದ ಬಿಲ್ಲು ಪಾವತಿಸಿ ಆರ್ಥಿಕ ಅವ್ಯವಹಾರ ಮಾಡಿದ್ದಾರೆ.

ಮಾನ್ಯ ಉಪ ಲೋಕಾಯುಕ್ತರವರು, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ರಾಜಪ್ಪ, ಅಂದಿನ ಕಾರ್ಯದರ್ಶಿ ಇವರು ಗ್ರಾಮ ಪಂಚಾಯತಿಯಲ್ಲಿ ಕೆಲಸ ಮಾಡುತ್ತಿದ್ದ 3 ಜನರ ಹೆಸರಿಗೆ ಚೆಕ್ ಡ್ರಾ ಮಾಡಿರುವುದನ್ನು ಒಪ್ಪಿಕೊಂಡಿದ್ದು, ಈ ಕುರಿತು ಮೇಲಾಧಿಕಾರಿಗಳಿಗೆ ಪತ್ರ ಮುಖೇನ ತಿಳಿಸಿರುವುದಾಗಿ ಹೇಳಿರುವರಾದರೂ ಮೇಲಾಧಿಕಾರಿಗಳು ಕೊಟ್ಟಿರುವ ಅನುಮತಿ ಪತ್ರವನ್ನು ಒದಗಿಸಿಲ್ಲವೆಂದು, ಮೇಲೆ ತಿಳಿಸಿರುವ ಆಪಾದಿತರು 2 ಕೃಷಿ ಹೊಂಡಗಳ ಕಾಮಗಾರಿಯನ್ನು ನಿರ್ವಹಿಸದಿದ್ದರೂ ಅಳತೆ ಪುಸ್ತಕದಲ್ಲಿ ವಿವರಗಳನ್ನು ನಮೂದಿಸಿ ಬಿಲ್ಲುಗಳನ್ನು ಪಾವತಿ ಮಾಡಿ ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡುಬರುತ್ತದೆಯೆಂದು, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳಲ್ಲಿ ಅವರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡು ಬರುವುದಿಲ್ಲವೆಂದು, ಪ್ರಕರಣದಲ್ಲಿ ಭಾಗಿಯಾಗಿರುವ 4 ಜನ

ಆಪಾದಿತರುಗಳ ಪೈಕಿ ಶ್ರೀ ತಿಮ್ಮಪ್ಪ, ಹಿಂದಿನ ಅಧ್ಯಕ್ಷರು, ಅಂದನೂರು ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು ಇವರು ಚುನಾಯಿತ ಪ್ರತಿನಿಧಿಯಾಗಿದ್ದು, ಇವರ ವಿರುದ್ಧ 2 ಕೃಷಿ ಹೊಂಡಗಳ ಕಾಮಗಾರಿ ನಿರ್ವಹಿಸದೇ ಬಿಲ್ಲುಗಳನ್ನು ಪಾವತಿ ಮಾಡಿ ಹಣ ದುರುಪಯೋಗ ಮಾಡಿರುವ ಬಗ್ಗೆ ಸೂಕ್ತ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಹಾಗೂ ಇನ್ನುಳಿದ 3 ಜನ ಆಪಾದಿತರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಚಿತ್ರದುರ್ಗ ಜಿಲ್ಲೆ, ಹೊಳಲ್ಕೆರೆ ತಾಲ್ಲೂಕು, ಅಂದನೂರು ಗ್ರಾಮ ಪಂಚಾಯತಿಯಲ್ಲಿ 2009-10ನೇ ಸಾಲಿನಲ್ಲಿ ನರೇಗ ಯೋಜನೆಯಡಿಯಲ್ಲಿ ಮಂಜೂರಾದ ಕೂಲಿ ಹಣ ಹಾಗೂ 2 ಕೃಷಿ ಹೊಂಡಗಳ ಕಾಮಗಾರಿಯನ್ನು ನಿರ್ವಹಿಸದಿದ್ದರೂ ಅಳತೆ ಪುಸ್ತಕದಲ್ಲಿ ವಿವರಗಳನ್ನು ನಮೂದಿಸಿ ಬಿಲ್ಲುಗಳನ್ನು ಪಾವತಿ ಮಾಡಿ ಹಣ ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಆದ್ದರಿಂದ ಪ್ರಕರಣದಲ್ಲಿ ಭಾಗಿಯಾಗಿರುವ 4 ಜನ ಆಪಾದಿತರು ಸಾರ್ವಜನಿಕ / ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವೆಂದು ಕಂಡುಬರುತ್ತದೆ.

ಆದ್ದರಿಂದ, ಶ್ರೀ ತಿಮ್ಮಪ್ಪ, ಹಿಂದಿನ ಅಧ್ಯಕ್ಷರು, ಅಂದನೂರು ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು ಇವರು ಎಸಗಿರುವ ಅವ್ಯವಹಾರಗಳ ಬಗ್ಗೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಹಾಗೂ ಇನ್ನುಳಿದ 3 ಜನ ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 56 ಇಎನ್‌ಕ್ಯೂ 2017 ಬೆಂಗಳೂರು, ದಿನಾಂಕ. 17.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)

ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಜಿ.ಎಸ್.ರಾಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ, ಶಿವಪುರ, ಹೊಳಲ್ಕೆರೆ ತಾಲ್ಲೂಕು.
2. ಶ್ರೀ ನಟೇಶ್, ಹಿಂದಿನ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಳಲ್ಕೆರೆ.
3. ಶ್ರೀ ಎಸ್.ಟಿ.ಬಸವರಾಜಪ್ಪ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಳಲ್ಕೆರೆ.

ಶ್ರೀ ತಿಮ್ಮಪ್ಪ, ಹಿಂದಿನ ಅಧ್ಯಕ್ಷರು, ಅಂದನೂರು ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು ಇವರು ಎಸಗಿರುವ ಅವ್ಯವಹಾರಗಳ ಬಗ್ಗೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಅಗತ್ಯ ಕ್ರಮಬಹಿಸುವಂತೆ ಸಕ್ಷಮ ಪ್ರಾಧಿಕಾರವಾದ ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
7. ಉಪ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ನಿರ್ದೇಶಕರು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು - ಸೂಕ್ತ ಕ್ರಮಕ್ಕಾಗಿ.
9. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರ ಮುಖಾಂತರ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
12. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.